ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

೭೦

ಇಲಾಖೆ / ವಿಷಯ : DEPARTMENT / SUBJECT: ಡಿ.ಜೆ - ಬೆಂಗಳೂರು ಗಲಭೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 13/2/2021

# ಸಂಪತ್ ರಾಜ್‌ಗೆ ಬೇಲ್

## ಡಿಜೆಹಳ್ಳಿ ಗಲಭೆ: ಷರತ್ತು ಬದ್ಧ ಜಾಮೀನು

ಬೆಂಗಳೂರು: ಡಿ.ಜೆ ಹಳ್ಳಿ-ಕೆ.ಜಿ ಹಳ್ಳಿ ಗಲಭೆ ಪ್ರಕರಣ ಸಂಬಂಧ ಬಂಧನಕ್ಕೆ ಒಳಗಾಗಿರುವ ಮಾಜಿ ಮೇಯರ್ ಸಂಪತ್ ರಾಜ್‌ಗೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ಜಾಮೀನು ಕೋರಿ ಸಂಪತ್ ರಾಜ್ ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿದ ನ್ಯಾ. ಜಾನ್ ಮೈಕೆಲ್ ಕುನ್ಹಾ



ಅವರಿದ್ದ ಏಕಸದಸ್ಯ ನ್ಯಾಯಪೀಠ, ಷರತ್ತುಬದ್ಧ ಜಾಮೀನು ಮಂಜೂರು ಮಾಡಿ ಶುಕ್ರವಾರ ಆದೇಶಿಸಿತು.

ತನಿಖೆ ಅಂತಿಮ ಹಂತಕ್ಕೆ ಬಂದಿದೆ. ಈಗಾಗಲೇ ತನಿಖಾಧಿಕಾರಿಗಳು ಕೋರ್ಟ್‌ಗೆ ಎರಡು ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ಈ ಹಂತದಲ್ಲಿ ಆರೋಪಿಗೆ ಜಾಮೀನು ನೀಡಬಹುದು ಎಂದು ನ್ಯಾಯಪೀಠ ಆದೇಶದಲ್ಲಿ ಅಭಿಪ್ರಾಯಪಟ್ಟಿದೆ.

ಸಾಕ್ಷಿಗಳ ಮೇಲೆ ಪ್ರಭಾವ ಬೀರಲು ಅಥವಾ ಸಾಕ್ಷ್ಯ ನಾಶ ಪಡಿಸಲು ಯತ್ನಿಸಬಾರದು. ಪೊಲೀಸರ ತನಿಖೆಗೆ ಸಹಕರಿಸಬೇಕು ಹಾಗೂ ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ತಪ್ಪದೇ ಹಾಜರಾಗಬೇಕು. ಕೋರ್ಟ್ ಅನುಮತಿ ಇಲ್ಲದೆ ಬೆಂಗಳೂರು ನಗರ ಬಿಟ್ಟು ತೆರಳುವಂತಿಲ್ಲ ಎಂದು ಜಾಮೀನಿಗೆ ಷರತ್ತು ವಿಧಿಸಿರುವ ಹೈಕೋರ್ಟ್, ಒಂದೊಮ್ಮೆ ಆರೋಪಿ ಷರತ್ತು ಉಲ್ಲಂಘಿಸಿದರೆ ಜಾಮೀನು ರದ್ದತಿಗೆ ಕೋರಿ ಸಿಸಿಬಿ ಪೊಲೀಸರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದೆ.

**ಬೆಂಬಲಿಗರಿಂದ ಅಭಿನಂದನೆ:** ಡಿ.ಜೆ ಹಳ್ಳಿ ಹಾಗೂ ಕೆ.ಜಿ ಹಳ್ಳಿ ಗಲಭೆ ಪ್ರಕರಣದಲ್ಲಿ ಜೈಲು ಸೇರಿದ್ದ ಸಂಪತ್ ರಾಜ್ ಶುಕ್ರವಾರ ಸಂಜೆ ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಜೈಲಿನ ಗೇಟ್ ಬಳಿ ಸಂಪತ್ ರಾಜ್ ಬೆಂಬಲಿಗರು ಹಾರಹಾಕಿ ಅಭಿನಂದಿಸಿದ್ದಾರೆ. ಪೊಲೀಸರು ಹೇಳಿದರೂ ಕೇಳದ ಬೆಂಬಲಿಗರು ಸಂಪತ್ ರಾಜ್ ಕಾರಿಗೆ ಮುತ್ತಿಗೆ ಹಾಕಿದರು. ಈ ವೇಳೆ ಪೊಲೀಸರು ಲಾಠಿ ಪ್ರಹಾರ ನಡೆಸಿದರು. ರಸ್ತೆ ಖಾಲಿ ಇದ್ದರೂ ಕೆಲ ಬೆಂಬಲಿಗರು ರಂಪಾಟ ಮಾಡಿ ಹಾರಗಳನ್ನು ಹಾಕಲು ಕಾರಿನ ಮೇಲೆ ಎಗರಿ ಬಿದ್ದು ಜೈಲಿನ ಬಳಿ ಹೈಡ್ರಾಮ ಸೃಷ್ಟಿಸಿದರು.

ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಸಂಪತ್ ರಾಜ್, 'ನನಗೆ ನ್ಯಾಯಾಂಗ ವ್ಯವಸ್ಥೆ ಮೇಲೆ ನಂಬಿಕೆಯಿದೆ. ಆ ನಂಬಿಕೆಯಿಂದಲೇ ನಾನು ಇವತ್ತು ಬಿಡುಗಡೆಯಾಗಿದ್ದೇನೆ. ಮುಂದೆ ನಾನು ಈ ಆರೋಪಗಳಿಂದ ಮುಕ್ತನಾಗುವ ವಿಶ್ವಾಸ ಇದೆ' ಎಂದರು.

### ಹೋರಾಟ ಮುಂದುವರಿಯಲಿದೆ

ಬೆಂಗಳೂರು: ಡಿ.ಜೆ.ಹಳ್ಳಿ ಪ್ರಕರಣದಲ್ಲಿ ನನ್ನ ಹೋರಾಟ ಮುಂದುವರಿಯಲಿದೆ ಎಂದು ಪುಲಕೇಶಿನಗರ ಶಾಸಕ ಅಖಂಡ



ಶ್ರೀನಿವಾಸಮೂರ್ತಿ ತಿಳಿಸಿದ್ದಾರೆ. ಈ ಕುರಿತು ಸುದ್ದಿಗಾರರ ಜತೆ ಮಾತನಾಡಿದ ಅವರು, ಸಂಪತ್ ರಾಜ್ ಅವರನ್ನು ಪಕ್ಷದಿಂದ ಅಮಾನತು ಮಾಡುವಂತೆ ಮನವಿ ಮಾಡಿದ್ದೇನೆ. ಸೋನಿಯಾಗಾಂಧಿಯವರಿಗೂ ಪತ್ರ ಬರೆಯುತ್ತೇನೆ. ನನ್ನ ಜತೆ ಸಿದ್ದರಾಮಯ್ಯ, ಜಮೀರ್ ಅಹಮದ್ ಇದ್ದಾರೆ. ನನಗೆ ನ್ಯಾಯ ಸಿಗುವ ಭರವಸೆ ಇದೆ ಎಂದರು. ಸಂಪತ್ ರಾಜ್ ಮೇಲೆ ಕ್ರಮಕ್ಕೆ ನಾನು ಒತ್ತಡ ಹಾಕಿದ್ದೇನೆ. ಆದರೂ ಅಧ್ಯಕ್ಷರು ಏನೂ ಕ್ರಮ ತೆಗೆದುಕೊಂಡಿಲ್ಲ. ನ್ಯಾಯಾಲಯದ ಜಾಮೀನಿನ ಬಗ್ಗೆ ನಾನು ಏನೂ ಮಾತನಾಡುವುದಿಲ್ಲ. ನಾನು ಹೋರಾಟ ಮುಂದುವರಿಸುತ್ತೇನೆ. ಡಿ.ಕೆ.ಶಿವಕುಮಾರ್ ಯಾಕೆ ಅವರ ಪರ ನಿಂತಿದ್ದಾರೋ ಗೊತ್ತಿಲ್ಲ. ನಾನು ವಲಸೆ ಬಂದಿರಬಹುದು, ಆದರೆ ಇದೇ ಪಕ್ಷದ ಮೂಲಕ ಗೆದ್ದವನು. ಮನೆಯನ್ನೇ ಸುಟ್ಟವರನ್ನು ಸುಮ್ಮನೆ ಬಿಡ್ತಾರಾ? ಎಂದರು.